**M.V.C.No. 552/2025**
**PW2**

ದಿನಾಂಕ 24.01.2026 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾದ ಪ್ರಮಾಣವಚನ ಭೋಧಿಸಲಾಯಿತು.

ಪಾಟೀ ಸವಾಲುಃ ಎದುರುದಾರರ ಪರ ಶ್ರೀ ಎನ್.ಕೆ ವಕೀಲರಿಂದಃ

ನಾನು ಈ ಅಪಘಾತದ ಕುರಿತು ದಾಖಲಾಗಿದ್ದ ಕ್ರಿಮಿನಲ್ ಪ್ರಕರಣದಲ್ಲಿ ಸಾಕ್ಷಿದಾರನಾಗಿ ನ್ಯಾಯಾಲಯಕ್ಕೆ ಹಾಜರಾಗಿ ಸಾಕ್ಷಿ ನುಡಿದಿರುತ್ತೇನೆ ಎಂದರೆ ಸರಿ. ಸದರಿ

ಸಾಕ್ಷಿ ಹೇಳಿಕೆಯ ದೃಢೀಕೃತ ನಕಲನ್ನು ಸಾಕ್ಷಿಗೆ ತೋರಿಸಿದ್ದು ಅದನ್ನು ನೋಡಿ ಗುರುತಿಸಿರುತ್ತಾರೆ. ಆ ಕಾರಣಕ್ಕೆ ಅದನ್ನು ನಿ.ಆರ್–1 ಎಂದು ಗುರುತಿಸಲಾಯಿತು. ಬೋಜಪ್ಪ ಗೌಡರು ನನ್ನ ಸಂಬಂಧಿಕರಲ್ಲ, ಆದರೆ ಊರಿನವರು. ಬೋಜಪ್ಪ ಗೌಡರ ಪತ್ನಿ ನನ್ನನ್ನು ಸಂಬಂಧಿಕರು ಎಂದು ಹೇಳಿರುವುದು ಸರಿಯಲ್ಲ. ನಾನು ಮೃತ ಬೋಜಪ್ಪ ಗೌಡರ ಸಂಬಂಧಿಕರಾಗಿದ್ದು ಕುಟುಂಬದವರಿಗೆ ಹೆಚ್ಚಿನ ಪರಿಹಾರ ಕೊಡಿಸುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತ ಮೃತ ಬೋಜಪ್ಪ ಗೌಡರ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

(ಸಾ.ಓ.ಹೇ.ಕೇ.ಸ.ಇ.ಎ.ಒ)

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ, ಸುಳ್ಯ